ಕರ್ನಾಟಕ ಸರ್ಕಾರ
Government of karnataka

ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ
DEPARTMENT OF STATE EDUCATIONAL RESEARCH AND TRAINING
No 4, 100 FT RING ROAD, BANASHANKARI 3 RD STAGE BENGALURU - 560 085
Email: dpi.dsert-ka@nic.in Website: http://dsert.kar.nic.in

ಡಿಎಸ್‌ಇಆರ್‌ಟಿ
DSERT

Phone - 080
26980100
Fax - 080
26422377

DSERT: ETC-6/ದೂರದರ್ಶನ/ಪಾಠಪ್ರಸಾರ/08/20-21 ದಿ:07-10-2020

## ಸುತ್ತೋಲೆ

ವಿಷಯ: ದಿನಾಂಕ 12-10-2020 ರಿಂದ 5,6 ಮತ್ತು 7ನೇ ತರಗತಿಯ ವಿದ್ಯಾರ್ಥಿಗಳಿಗೆ ವೀಡಿಯೋ ಪಾಠಗಳನ್ನು ಡಿ.ಎಸ್.ಇ.ಆರ್.ಟಿ ಜ್ಞಾನ ದೀಪ ಹಾಗೂ ಮಕ್ಕಳವಾಣಿ ಯೂಟ್ಯೂಬ್ ಚಾನಲ್ ನಲ್ಲಿ ಪ್ರಸಾರ ಮಾಡುತಿದ್ದು ವ್ಯಾಪಕ ಪ್ರಚಾರ ನೀಡಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಬಗ್ಗೆ.

*****

ಪ್ರಸಕ್ತ ಸಾಲಿನಲ್ಲಿ ಕೋವಿಡ್-19ರ ಹಿನ್ನಲೆಯಲ್ಲಿ ಶಾಲೆಗಳು ವಿಳಂಬವಾಗಿ ಪ್ರಾರಂಭವಾಗುತ್ತಿರುವುದರಿಂದ ಹಾಗೂ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ನಷ್ಟ ಉಂಟಾಗುತ್ತಿರುವುದರಿಂದ ವಿದ್ಯಾರ್ಥಿಗಳು ತಮ್ಮ ತಮ್ಮ ಮನೆಯಲ್ಲಿಯೇ ಕಲಿಯಲು ಅವಕಾಶ ಕಲ್ಪಿಸುವ ಉದ್ದೇಶದಿಂದ ಈಗಾಗಲೇ 8, 9 ಮತ್ತು 10ನೇ ತರಗತಿಯ ವಿದ್ಯಾರ್ಥಿಗಳಿಗೆ ದೂರದರ್ಶನದ ಚಂದನ ವಾಹಿನಿಯಲ್ಲಿ ಪಾಠವನ್ನು ಪ್ರಸಾರ ಮಾಡಲಾಗುತ್ತಿದೆ ಇದಕ್ಕೆ ತಮ್ಮಿಂದ ದೊರೆತಿರುವ ಬೆಂಬಲ ಸ್ಮರಿಸಲಾಗಿದೆ. ಪ್ರಸ್ತುತ 5, 6 ಮತ್ತು 7ನೇ ತರಗತಿಯ ಪ್ರಥಮ ಭಾಷೆ ಕನ್ನಡ, ದ್ವಿತೀಯ ಭಾಷೆ ಇಂಗ್ಲೀಷ್, ತೃತೀಯ ಭಾಷೆ ಹಿಂದಿ, ಕನ್ನಡ ಮಾಧ್ಯಮದಲ್ಲಿ ಗಣಿತ, ವಿಜ್ಞಾನ, ಸಮಾಜ ವಿಜ್ಞಾನ ವಿಷಯಗಳಲ್ಲಿ ಪಾಠಗಳನ್ನು ಸಿದ್ಧಪಡಿಸಿ ಡಿ.ಎಸ್.ಇ.ಆರ್.ಟಿ ಜ್ಞಾನ ದೀಪ ಹಾಗೂ ಮಕ್ಕಳವಾಣಿ ಯೂಟ್ಯೂಬ್ ಚಾನಲ್ ನಲ್ಲಿ ದಿನಾಂಕ 12-10-2020 ರಿಂದ ಸೋಮವಾರದಿಂದ ಶುಕ್ರವಾರದವರೆಗೆ ಪ್ರಸಾರ ಮಾಡಲಾಗುತ್ತಿದೆ. ಇದರೊಂದಿಗೆ ಮೊದಲ ವಾರದ ವೇಳಾಪಟ್ಟಿಯನ್ನು ಲಗತ್ತಿಸಲಾಗಿದೆ ಮುಂದಿನ ದಿನಗಳ ವೇಳಾಪಟ್ಟಿಯನ್ನು ನಂತರ ತಿಳಿಸಲಾಗುವುದು. ವೇಳಾಪಟ್ಟಿ ಮಾಹಿತಿಯನ್ನು ಎಲ್ಲಾ ಶಾಲೆಗಳ ಶಿಕ್ಷಕರು ಮುಖ್ಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳಿಗೆ ತಲುಪುವಂತೆ ಕ್ರಮವಹಿಸುವುದು.

ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿನ ಎಲ್ಲಾ ಪ್ರೌಢ ಶಾಲೆಗಳ ಮುಖ್ಯ ಶಿಕ್ಷಕರು ಹಾಗೂ ಶಿಕ್ಷಕರು ವಿದ್ಯಾಗಮ ಸುತ್ತೋಲೆಯಲ್ಲಿ ತಿಳಿಸಿರುವಂತೆ ಕಾರ್ಯಕ್ರಮದ ಅನುಪಾಲನೆಯನ್ನು ಮಾಡುವಂತೆ ಸೂಚಿಸುವುದು.

ಶಾಲಾ ಮುಖ್ಯ ಶಿಕ್ಷಕರು, ಸಹ ಶಿಕ್ಷಕರು, ಸಿ.ಆರ್.ಪಿ, ಬಿ.ಆರ್.ಪಿ. ಕ್ಷೇತ್ರ ಸಮನ್ವಯಾಧಿಕಾರಿಗಳು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ತಮ್ಮ ಹಂತಗಳಲ್ಲಿ ವ್ಯಾಪಕ ಪ್ರಚಾರ ನೀಡಿ ವಿದ್ಯಾರ್ಥಿಗಳು ಈ ಕಾರ್ಯಕ್ರಮದ ಪ್ರಯೋಜನವನ್ನು ಪಡೆದು ಜ್ಞಾನಾರ್ಜನೆಯನ್ನು ಮಾಡಿಕೊಳ್ಳಲು ಅನುಕೂಲವಾಗುವಂತೆ ಅಗತ್ಯ ಕ್ರಮವಹಿಸಲು

ಉಪನಿರ್ದೇಶಕರು(ಆಡಳಿತ) ಮತ್ತು ಡಯಟ್ ಪ್ರಾಂಶುಪಾಲರು ಹಾಗೂ ಉಪನಿರ್ದೇಶಕರು(ಅಭಿವೃದ್ಧಿ) ರವರಿಗೆ ತಿಳಿಸಿದೆ.

ನಿರ್ದೇಶಕರು

ಡಿ.ಎಸ್.ಇ.ಆರ್.ಟಿ.

ಬೆಂಗಳೂರು

ಗೆ,

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಹಾಗೂ ಉಪನಿರ್ದೇಶಕರು(ಅಭಿವೃದ್ಧಿ) ರವರಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಎಲ್ಲಾ ಕ್ಷೇತ್ರ ಸಮನ್ವಯಾಧಿಕಾರಿಗಳಿಗೆ ಉಪನಿರ್ದೇಶಕರು(ಆಡಳಿತ) ರವರ ಮೂಲಕ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು,

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು- ಕರ್ನಾಟಕ ಸರ್ಕಾರ ರವರ ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸುತ್ತಾ, ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರವರಿಗೆ ಗೌರವ ಪೂರ್ವಕವಾಗಿ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರುರವರಿಗೆ ಗೌರವ ಪೂರ್ವಕವಾಗಿ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ನೃಪತುಂಗ ರಸ್ತೆ, ಬೆಂಗಳೂರುರವರಿಗೆ ಗೌರವ ಪೂರ್ವಕವಾಗಿ ಅವಗಾಹನೆಗೆ ಸಲ್ಲಿಸಿದೆ.
5. ಅಪರ ಆಯುಕ್ತರು, ಸಾ.ಶಿ.ಇ., ಧಾರವಾಡ ಆಯುಕ್ತಾಲಯ ಮತ್ತು ಕಲಬುರಗಿ ಸಾ.ಶಿ.ಇ. ಕಲಬುರಗಿ ಆಯುಕ್ತಾಲಯ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
6. ನಿರ್ದೇಶಕರು, ಪ್ರಾಥಮಿಕ ಶಿಕ್ಷಣ, ಪ್ರೌಢ ಶಿಕ್ಷಣ, ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ರವರಿಗೆ ಮಾಹಿತಿಗಾಗಿ.
7. ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಹಾಗೂ ನಿರ್ದೇಶಕರು ಹಿಂದುಳಿದ ಮತ್ತು ಅಲ್ಪಸಂಖ್ಯಾತ ಇಲಾಖೆ- ಕರ್ನಾಟಕ ಸರ್ಕಾರ ರವರಿಗೆ ಕಳುಹಿಸುತ್ತಾ, ತಮ್ಮ ಇಲಾಖಾ ವ್ಯಾಪ್ತಿಯಲ್ಲಿ ಬರುವ ಶಾಲಾ ಮುಖ್ಯಸ್ಥರುಗಳ ಮೂಲಕ ವಿದ್ಯಾರ್ಥಿಗಳಿಗೆ ಸದರಿ ಮಾಹಿತಿ ತಲುಪುವಂತೆ ಕ್ರಮವಹಿಸಲು ಕೋರಿದೆ.
8. ಕಛೇರಿ ಪ್ರತಿ.

| ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ<br>ಸಂವೇದ –ಇ ಕ್ಲಾಸ್ ಕಲಿಕಾ ಕಾರ್ಯಕ್ರಮ 5 ರಿಂದ 7ನೇ ತರಗತಿ– ಯೂಟ್ಯೂಬ್ ನಲ್ಲಿ ಅಪ್‌ಲೋಡ್ ಮಾಡುವ ವೇಳಾಪಟ್ಟಿ – 2020–21 | | | | |
|---|---|---|---|---|
| **ವಾರ** | **10.00 AM –10.30 AM** | **10.30 AM- 11.00 AM** | **11.00 AM- 11.30 AM** | **11.30 AM- 12.00 Noon** |
| ಸೋಮವಾರ<br>Day 1<br>12/10/2020 | 5 ಗಣಿತ<br>5 ಅಂಕಿಗಳ ಸಂಖ್ಯೆಗಳು<br>1–(1/3) | 7 ಇಂಗ್ಲೀಷ್<br>The healthy life<br>1–(1/2) | 6 ಇಂಗ್ಲೀಷ್<br>The Light house<br>1–(1/2) | 7 ವಿಜ್ಞಾನ<br>ಸಸ್ಯಗಳಲ್ಲಿ ಪೋಷಣೆ<br>1–(1/2) |
| ಮಂಗಳವಾರ<br>Day 2<br>13/10/2020 | 7 ಸಮಾಜ ವಿಜ್ಞಾನ<br>ವಿಜಯನಗರದ ಅರಸು ಮನೆತನ 1–(1/2) | 5 ಕನ್ನಡ<br>ಒಟ್ಟಿಗೆ ಬಾಳುವ ಆನಂದ<br>1–(1/1) | 7 ಕನ್ನಡ<br>ಪುಟ್ಟಜ್ಜ ಪುಟ್ಟಜ್ಜಿ ಕಥೆ ಹೇಳು<br>1–(1/1) | 6 ಗಣಿತ<br>ಸಂಖ್ಯೆಗಳನ್ನು ತಿಳಿಯುವುದು<br>1–(1/4) |
| ಬುಧವಾರ<br>Day 3<br>14/10/2020 | 7 ಗಣಿತ<br>ಪೂರ್ಣಾಂಕಗಳು<br>1–(1/3) | 5 ಇವಿಎಸ್<br>ಜೀವ ಪ್ರಪಂಚ<br>1–(1/2) | 6 ಗಣಿತ<br>ಸಂಖ್ಯೆಗಳನ್ನು ತಿಳಿಯುವುದು<br>1–(2/4) | 7 ಹಿಂದಿ<br>padana hai |
| ಗುರುವಾರ<br>Day 4<br>15/10/2020 | 6 ವಿಜ್ಞಾನ ಆಹಾರ ಎಲ್ಲಿಂದ ದೊರೆಯುತ್ತದೆ<br>1–(1/1) | 5 ಇವಿಎಸ್<br>ಜೀವ ಪ್ರಪಂಚ<br>1–(2/2) | 6 ಕನ್ನಡ<br>ದೊಡ್ಡವರ ದಾರಿ<br>1–(1/1) | 7 ವಿಜ್ಞಾನ<br>ಸಸ್ಯಗಳಲ್ಲಿ ಪೋಷಣೆ<br>1–(2/2) |
| ಶುಕ್ರವಾರ<br>Day 5<br>16/10/2020 | 7 ಗಣಿತ<br>ಪೂರ್ಣಾಂಕಗಳು<br>1–(2/3) | 5 ಇಂಗ್ಲೀಷ್<br>Love for animal<br>1–(1/2) | 6 ಹಿಂದಿ<br>Aksharabyas | 7 ಸಮಾಜ ವಿಜ್ಞಾನ<br>ಇತಿಹಾಸ ಪರಿಚಯ<br>1–(1/1) |

(ಎಂ.ಆರ್.ಮಾರುತಿ)
ನಿರ್ದೇಶಕರು
ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ
ಬೆಂಗಳೂರು.